# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಕೆ.ಆರ್.ಪುರ ಉಪ ವಲಯ, ಮಹದೇವಪುರ ವಲಯ, ಬೆಂಗಳೂರು-560036.

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಕೆ.ಆರ್.ಪಿ.ಉವ/ಪಿಆರ್/ /2022-23 ದಿನಾಂಕ: 03-02-2023

ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ: 21-09-2020 ರಂತೆ ದಿನಾಂಕ: 03-02-2023 ರಂದು ಹೊಸ ವಾರ್ಡ್ ಸಂಖ್ಯೆ:89, ದೇವಸಂದ್ರ ವಾರ್ಡ್ ಕಮಿಟಿ ಸಭೆಯನ್ನು ವಾರ್ಡ್ ಕಛೇರಿಯಲ್ಲಿ ನೋಡಲ್ ಅಧಿಕಾರಿಗಳು ಹಾಗೂ ಶ್ರೀ.ಕೇಶವ್, ಸಹಾಯಕ ಅಭಿಯಂತರರು ರವರ ಅಧ್ಯಕ್ಷತೆಯಲ್ಲಿ ನಡೆದಿರುವ ಸಭೆಯ ನಡುವಳಿಗಳು:

ದಿನಾಂಕ: 03-02-2023 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.89, ದೇವಸಂದ್ರ ಮುಖ್ಯ ಅಭಿಯಂತರರ ಕಛೇರಿಯ ಸಭಾಂಗಣದಲ್ಲಿ ವಾರ್ಡ್ ಸಮಿತಿ ಸಭೆ ಕೈಗೊಳ್ಳಲಾಯಿತು.

- ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು, ದೇವಸಂದ್ರ ವ್ಯಾಪ್ತಿಯ ಗೀತಾ ಕ್ಲೀನಿಕ್ ರಸ್ತೆ ಬಳಿಯಿರುವ ಪಾದಾಚಾರಿ ಮಾರ್ಗದಲ್ಲಿ ಸ್ಲಾಬ್ ದುರಸ್ಥಿಯಾಗಿದ್ದು ಮತ್ತು ಇದರಿಂದ ಸಮಸ್ಯೆ ಉಂಟಾಗುತ್ತಿರುವ ಬಗ್ಗೆ ತಿಳಿಸಿದರು. ಈ ವಿಷಯದ ಕುರಿತು ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರು ಕೂಡಲೇ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.
- ದೇವಸಂದ್ರ ವ್ಯಾಪ್ತಿಯ ಗೀತಾ ಕ್ಲೀನಿಕ್ ರಸ್ತೆಯಲ್ಲಿ ಬಿ.ಡಬ್ಲ್ಯು.ಎಸ್.ಎಸ್.ಬಿ ವತಿಯಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗಾಗಿ ಒಳಚರಂಡಿ ಸಂಪರ್ಕ ಮತ್ತು ಕುಡಿಯುವ ನೀರಿನ ಸಮರ್ಪಕ ಸರಬರಾಜುಗಾಗಿ ಕೈಗೊಂಡಿರುವ ಅನೇಕ ಕಾಮಗಾರಿಗಳನ್ನು ಕೈಗೊಂಡು ಅಗೆದಿರುವ ರಸ್ತೆಗಳನ್ನು ಪುನಶ್ಚೇತಗೊಳಿಸದೇ ಹಾಗೆಯೇ ಬಿಟ್ಟಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಸಮಸ್ಯೆಯಾಗುತ್ತಿದ್ದು, ಆದರಿಂದ ರಸ್ತೆಯನ್ನು ಪುನಶ್ಚೇತಗೊಳಿಸಲು ಹಾಜರಿದ್ದ ಸದರಿ ಅಧಿಕಾರಿಗಳಿಗೆ ತಿಳಿಸಿದರು.
- ದೇವಸಂದ್ರ ವ್ಯಾಪ್ತಿಯಲ್ಲಿರುವ ಸ್ಕೈವಾಕ್‌ನ ಮೆಟ್ಟಿಲು ದುರಸ್ಥಿಗೊಂಡಿದ್ದು, ಕೂಡಲೇ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿದರು.

*********

ಮುಂದುವರೆದು ಸಾರ್ವಜನಿಕರು ಯಾವುದೇ ರೀತಿಯ ಸಮಸ್ಯೆಯು ಇಲ್ಲದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಸಮಸ್ಯೆಗಳು ಉಂಟಾಗದಂತೆ ಕ್ರಮ ಕೈಗೊಳ್ಳುವ ಬಗ್ಗೆ ಕೆಳಕಂಡಂತೆ ಚರ್ಚಿಸಲಾಯಿತು.

- ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ಘನ ತ್ಯಾಜ್ಯ ನಿರ್ವಹಣೆ ಕಾಮಗಾರಿಯನ್ನು ದೈನಂದಿನ ಕೈಗೊಳ್ಳುತ್ತಿದ್ದು, ಮುಂದಿನ ದಿನಗಳಲೂ ಸಹ ಇದೇ ರೀತಿ ಕ್ರಮ ವಹಿಸುವಂತೆ ಸಭೆಯಲ್ಲಿ ಹಾಜರಿದ್ದ ಘನ ತ್ಯಾಜ್ಯ ನಿರ್ವಹಣೆ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರುರೊಂದಿಗೆ ಚರ್ಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿರುವ ಮುಖ್ಯ ರಸ್ತೆಗಳು ದುರಸ್ಥಿಗೊಂಡಿದ್ದಲ್ಲಿ, ಸೂಕ್ತ ಕ್ರಮ ಕೈಗೊಳ್ಳುವಂತೆ ಅಥವಾ ಡಾಂಬರೀಕರಣದ ಅವಶ್ಯಕತೆಯಿದ್ದಲ್ಲಿ ಕೂಡಲೇ ಕ್ರಮ ವಹಿಸುವಂತೆ ಹಾಗೂ ರಸ್ತೆ ಚರಂಡಿಯಲ್ಲಿನ ಹೂಳನ್ನು ತೆರವುಗೊಳಿಸುವಂತೆ ಮತ್ತು ಪಾದಚಾರಿ ಮಾರ್ಗವು ಒತ್ತುವರಿಯಾಗಿದ್ದಲ್ಲಿ, ಪಾದಚಾರಿ ಮಾರ್ಗವನ್ನು

ತೆರವುಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ರಸ್ತೆ ಮೂಲಭೂತ ಸೌಕರ್ಯ ಇಲಾಖೆಯ ಸಹಾಯಕ ಅಭಿಯಂತರರುರೊಂದಿಗೆ ಚರ್ಚಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆಗಳನ್ನು ಗುಂಡಿ ಮುಕ್ತ ರಸ್ತೆಗಳನ್ನಾಗಿಸುವಂತೆ ಮತ್ತು ರಸ್ತೆ ಚರಂಡಿಯಲ್ಲಿನ ಹೂಳನ್ನು ತೆರವುಗೊಳಿಸುವಂತೆ ಮತ್ತು ಪಾದಚಾರಿ ಮಾರ್ಗವು ಒತ್ತುವರಿಯಾಗಿದ್ದಲ್ಲಿ, ಪಾದಚಾರಿ ಮಾರ್ಗವನ್ನು ತೆರವುಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ವಾರ್ಡ್‌ನ ಸಹಾಯಕ ಕಾರ್ಯಪಾಲಕ ಅಭಿಯಂತರರುರೊಂದಿಗೆ ಕ್ರಮ ವಹಿಸುವಂತೆ ಚರ್ಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿರುವ ರಾಜಕಾಲುವೆಗಳಲ್ಲಿನ ಹೂಳಿನಿಂದ ಮಳೆಗಾಲ ಸಮಯದಲ್ಲಿ ಯಾವುದೇ ರೀತಿಯ ಅಪಘಾತ ಸಂಭವಿಸದಂತೆ ಕ್ರಮ ವಹಿಸಲು ಹೂಳನ್ನು ತೆರವುಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ಬೃಹತ್ ನೀರುಗಾಲುವೆ ಇಲಾಖೆಯ ಸಹಾಯಕ ಅಭಿಯಂತರರುರೊಂದಿಗೆ ಚರ್ಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿರುವ ಕೆರೆಗಳನ್ನು ಸ್ವಚ್ಛಗೊಳಿಸುವಂತೆ ತಿಳಿಸಿದರು, ಇಲ್ಲವಾದಲ್ಲಿ ಸಾರ್ವಜನಿಕರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆಂದು ಸಭೆಯಲ್ಲಿ ಹಾಜರಿದ್ದ ಕೆರೆಗಳ ಇಲಾಖೆಯ ಸಹಾಯಕ ಅಭಿಯಂತರರುರೊಂದಿಗೆ ಚರ್ಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ನೀರಿನ ಸರಬರಾಜು ಸೌಲಭ್ಯವನ್ನು ಒದಗಿಸುವಂತೆ ಮತ್ತು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗಾಗಿ ಒಳಚರಂಡಿ ಸಂಪರ್ಕ ಮತ್ತು ಕುಡಿಯುವ ನೀರಿನ ಸರಬರಾಜುಗಾಗಿ ಕೈಗೊಂಡಿರುವ ಅನೇಕ ಕಾಮಗಾರಿಗಳನ್ನು ಕೈಗೊಂಡು ಅಗೆದಿರುವ ರಸ್ತೆಗಳನ್ನು ಪುನಶ್ಚೇತಗೊಳಿಸದೇ ಅನೇಕ ಕಡೆ ಹಾಗೆಯೇ ಬಿಟ್ಟಿರುವುದು ಕಂಡು ಬಂದಿರುತ್ತದೆ. ಇದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಸಮಸ್ಯೆಯಾಗುತ್ತಿದ್ದು, ಆದರಿಂದ ರಸ್ತೆಯನ್ನು ಪುನಶ್ಚೇತಗೊಳಿಸಲು ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಸಹಾಯಕ ಅಭಿಯಂತರರುರೊಂದಿಗೆ ಚರ್ಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜುಗಾಗಿ ರಸ್ತೆಯನ್ನು ಅಗೆದು ಪುನಶ್ಚೇತಗೊಳಿಸದೆ ಹಾಗೆ ಬಿಟ್ಟಿರುವುದರಿಂದ, ವಾಹನ ಚಾಲಕರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದ್ದು ಮತ್ತು ofc cable ಗಳಿಂದ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸುವಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಇಲಾಖೆಯ ಸಹಾಯಕ ಅಭಿಯಂತರರುರೊಂದಿಗೆ ಚರ್ಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ದುರಸ್ಥಿಗೊಂಡಿರುವ ಬೀದಿ ದೀಪಗಳನ್ನು ತೆರವುಗೊಳಿಸಿ, ಹೊಸದಾಗಿ ಬೀದಿ ದೀಪಗಳನ್ನು ಅಳವಡಿಸಲು ಮತ್ತು ಬೀದಿ ದೀಪ ಗಳಿಲ್ಲದ ಪ್ರದೇಶಗಳಲ್ಲಿ ಬೀದಿ ದೀಪ ಅಳವಡಿಸುವಂತೆ ಸಭೆಯಲ್ಲಿ ಹಾಜರಿದ್ದ ವಿದ್ಯುತ್ ಇಲಾಖೆಯ ಸಹಾಯಕ ಅಭಿಯಂತರರುರೊಂದಿಗೆ ಚರ್ಚಿಸಿದರು.

ದೇವಸಂದ್ರ ವಾರ್ಡ್ ನಂ: 89 ರ ವಾರ್ಡ್ ಕಮಿಟಿಯ ಕಾರ್ಯದರ್ಶಿಗಳಾದ ಸಹಾಯಕ ಅಭಿಯಂತರರು, ರವರು ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಕಾರ್ಯನಿರ್ವಹಿಸಲು ಕೋರುತ್ತಾ, ವಂದನಾರ್ಪಣೆಯನ್ನು ಸಲ್ಲಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ನಂ: 89